ಕರ್ನಾಟಕ ಸರ್ಕಾರ
ವಾರ್ತಾ ಹಾಗೂ ಸಾರ್ವಜನಿಕ ಸಂಪರ್ಕ ಇಲಾಖೆ
ನಂ.17, ವಾರ್ತಾ ಸೌಧ, ಭಗವಾನ್ ಮಹಾವೀರ ರಸ್ತೆ ಬೆಂಗಳೂರು 560 001. ದೂ. 080-22028032/34/ಫ್ಯಾಕ್ಸ್ 22028041

ದಿನಾಂಕ: 3-2-2015

# ಪತ್ರಿಕಾ ಪ್ರಕಟಣೆ

## ಯೋಜನೆ ಮಂಡಳಗೆ ಹೆಚ್ಚಿನ ಅಧಿಕಾರ ಅಗತ್ಯ

ಸಿ. ಎಂ. ಇಬ್ರಾಹಿಂ.

**ಬೆಂಗಳೂರು, ಫೆಬ್ರವರಿ 03 (ಕರ್ನಾಟಕ ವಾರ್ತೆ):**

ಯೋಜನಾ ಮಂಡಳಿಯು ಕೇವಲ ಯೋಜನೆಗಳ ರಚನೆ ಮಾತ್ರವಲ್ಲದೆ ಅವುಗಳ ಅನುಷ್ಠಾನದ ಮೇಲುಸ್ತುವಾರಿ ಮಾಡಿ ಪ್ರಗತಿ ಪರಿಶೀಲನೆ ನಡೆಸಿ ನ್ಯೂನತೆಗಳನ್ನು ಸರಿಪಡಿಸುವತ್ತ ಸೂಕ್ತ ಕ್ರಮ ಕೈಗೊಳ್ಳಲೂ ಸಹ ಅಧಿಕಾರ ನೀಡುವಂತೆ ಸರ್ಕಾರಕ್ಕೆ ಆಗ್ರಹಪಡಿಸಲಾಗುವುದು ಎಂದು ಮಂಡಳಿಯ ಉಪಾಧ್ಯಕ್ಷರಾದ ಮಾಜಿ ಕೇಂದ್ರ ಸಚಿವ ಶ್ರೀ ಸಿ. ಎಂ. ಇಬ್ರಾಹಿಂ ಅವರು ತಿಳಿಸಿದರು.

ಇಂದು ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದ ಅವರು ನಿನ್ನೆ ನಡೆದ ರಾಜ್ಯ ಯೋಜನಾ ಮಂಡಳಿಯ ಸಭೆಯಲ್ಲಿ ರಾಜ್ಯ ಸರ್ಕಾರವು ಜನಪರವಾದ ಅಭಿವೃದ್ಧಿ ಹಾಗೂ ಕಲ್ಯಾಣ ಕಾರ್ಯಕ್ರಮಗಳ ಕುರಿತಂತೆ ಕೈಗೊಳ್ಳಬಹುದಾದ ಹೊಸ ಯೋಜನೆ ಹಾಗೂ ಕಾರ್ಯಕ್ರಮಗಳ ಬಗ್ಗೆ ಚರ್ಚಿಸಿ ಶಿಫಾರಸ್ಸು ಮಾಡಲು ತೀರ್ಮಾನಿಸಿತು ಎಂದು ಅವರು ತಿಳಿಸಿದರು.

ಹಟ್ಟಿ ಭಾಗ್ಯ, ಅಣ್ಣ ಇಡ್ಲಿ, ಅಣ್ಣತಾರುಣ್ಯ ಆರೋಗ್ಯ ಯೋಜನೆ ಸೇರಿದಂತೆ ಹಲವಾರು ಅಭಿವೃದ್ಧಿ ಯೋಜನೆಗಳನ್ನು ರೂಪಿಸುವಂತೆ ರಾಜ್ಯ ಯೋಜನಾ ಮಂಡಳಿಯು ಮುಖ್ಯಮಂತ್ರಿಗಳಿಗೆ ಶಿಫಾರಸ್ಸು ಮಾಡಲು ತೀರ್ಮಾನಿಸಿದೆ ಎಂದರು.

ಪ್ರಮುಖವಾಗಿ ರಾಜ್ಯ ಸರ್ಕಾರದಲ್ಲಿ ಹಾಲಿ ಜಾರಿಯಲ್ಲಿರುವ ಯೋಜನೆಗಳಲ್ಲಿ ಸೇರಿಸಲಾಗದ ಕೆಲವೊಂದು ಬುಡಕಟ್ಟು ಜನರ ಆರ್ಥಿಕ ಅಭಿವೃದ್ಧಿ ಮಹಿಳಾ ಸಬಲೀಕರಣ ಹಾಗೂ ಸಾಲದ ಮೇಲಿನ ಸಹಾಯಧನ, ಬಡ್ಡಿ ನೀಡುವ ಸಲುವಾಗಿ ಹಟ್ಟಿ ಭಾಗ್ಯ ಯೋಜನೆಯನ್ನು ಜಾರಿಗೊಳಿಸುವಂತೆ ಸರ್ಕಾರದ ಮುಂದೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದ ಅವರು ಈ ಯೋಜನೆಯಡಿ ಕೆಲವು ಬುಡಕಟ್ಟು ಜನಾಂಗಗಳಾದ ಕಾಡು ಕುರುಬ, ಹಟ್ಟಿಗೊಲ್ಲ, ಕಾಡುಗೊಲ್ಲ, ಜೇನು ಕುರುಬ, ಬೆಟ್ಟದ ಕುರುಬ, ಹೆಳವ, ಸೋಲಿಗ, ಜೋಗಿ, ಸಿಳ್ಳೆಖ್ಯಾತ, ಬೈಲು ಪತ್ತಾರ್, ಮೇದರ, ಕೊರಚ, ಕೊರಮ, ಮುದ್ದೆಕಮ್ಮಾರ, ಗೊಂದಳ ಹಾಗೂ ಇತರೆ ಜನಾಂಗಳನ್ನು ಈ ಯೋಜನೆಗೆ ಗುರುತಿಸುವ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು. ಈ ಯೋಜನೆಯಿಂದಾಗಿ 8 ರಿಂದ 9 ಲಕ್ಷ ಜನರಿಗೆ ಉಪಯೋಗವಾಗಲಿದೆ.

ಬುಡಕಟ್ಟು ಜನರ ಸಹಭಾಗಿತ್ವದೊಂದಿಗೆ ಅರಣ್ಯ ಪ್ರದೇಶಗಳಲ್ಲಿನ ಕೃಷಿ ಸಂಬಂಧಿತ ಚಟುವಟಿಕೆಗಳನ್ನು ಕೈಗೊಂಡು ಆರ್ಥಿಕ ಸಬಲೀಕರಣಕ್ಕೆ ಒಳಗೊಳಿಸಬಹುದಾಗಿದೆ. ರಾಜ್ಯದ ಒಟ್ಟಾರೆ ಅರಣ್ಯ ಪ್ರದೇಶದಲ್ಲಿ ಶ್ರೀಗಂಧದ ಮರಗಳ ಸಂಖ್ಯೆ ಕಡಿಮೆಯಾಗುತ್ತಿದ್ದು ಶ್ರೀಗಂಧ ನಾಡು ಎಂದು ಹೆಸರಾಗಿರುವ ರಾಜ್ಯದಲ್ಲಿ

ಶ್ರೀಗಂಧ ಪ್ರಮಾಣ ಹೆಚ್ಚಿಸಲು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಅರಣ್ಯದ ಮೂಲ ಸ್ವರೂಪ ಹಾಳಾಗದಂತೆ ಶ್ರೀಗಂಧದ ಪ್ರಮಾಣ ಹೆಚ್ಚಿಸಲು ಚಿಂತಿಸಲಾಗಿದೆ. ಇದರೊಂದಿಗೆ ಸಾಗುವಾನಿ, ಬ್ಲಾಕ್‌ವುಡ್‌ಗಳ ಪ್ರಮಾಣ ಹೆಚ್ಚಿಸಲು ಇದೇ ರೀತಿಯ ಯೋಜನೆ ರೂಪಿಸಲು ಚಿಂತಿಸಲಾಗಿದೆ. ಈ ಯೋಜನೆಯ ಅನುಷ್ಠಾನಕ್ಕಾಗಿ ಸಂಪೂರ್ಣ ಕ್ರಿಯಾ ಯೋಜನೆ ರಚನೆ ಹಾಗೂ ಅನುಷ್ಠಾನ ಉಸ್ತುವಾರಿ ಹಾಗೂ ಪ್ರಗತಿ ಪರಿಶೀಲನೆಗಾಗಿ ಯೋಜನಾ ಮಂಡಳಿಯು ಅರಣ್ಯ ಇಲಾಖೆಯೊಂದಿಗೆ ಚರ್ಚೆ ನಡೆಸಿದೆ ಎಂದು ಅವರು ಹೇಳಿದರು.

ರಾಜ್ಯದ ಬಹುತೇಕ ಗುಡ್ಡಗಾಡು ಕಣಿವೆ ಪ್ರದೇಶಗಳಲ್ಲಿ ವಿದ್ಯುತ್ ಸಂಪರ್ಕ ಒದಗಿಸಲು ಅನುಕೂಲಕರ ವ್ಯವಸ್ಥೆ ಇಲ್ಲದ ಕಾರಣ ಅಂತಹ ಪ್ರದೇಶಗಳಲ್ಲಿ ಒಂದು ಸಮಗ್ರ ಸೌರಶಕ್ತಿ ವಿದ್ಯುತ್ ಪೂರೈಕೆ ಯೋಜನೆಯನ್ನು ಕೈಗೆತ್ತಿಕೊಳ್ಳಲು ಸರ್ಕಾರಕ್ಕೆ ಯೋಜನಾ ಮಂಡಳಿಯು ಶಿಫಾರಸ್ಸು ಮಾಡಲಿದೆ.

ಬಿ.ಪಿ.ಎಲ್. ಕಾರ್ಡುದಾರರಿಗೆ ಜಾರಿಯಲ್ಲಿರುವ ಅನ್ನಭಾಗ್ಯದಂತೆ ಎ.ಪಿ.ಎಲ್. ಕಾರ್ಡುದಾರರಿಗೆ ತಿಂಗಳಿಗೆ 15 ಕೆ,.ಜಿ. ಅಕ್ಕಿ, ಎಣ್ಣೆ, ಬೇಳೆ, ಐಯೋಡೈಸ್ಡ್ ಉಪ್ಪು, ರಿಯಾಯಿತಿ ದರದಲ್ಲಿ ಸರ್ಕಾರ ನೀಡುವಂತೆ ಶಿಫಾರಸ್ಸು ಮಾಡಲಾಗುವುದು. ಇದೇ ರೀತಿಯ ಸೌಲಭ್ಯ ಒದಗಿಸಲು ಯೋಜನೆ ರೂಪಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಿರುವ ಮಂಡಳಿಯು ರಾಜ್ಯ ಸರ್ಕಾರದ ಅಡಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕ್ಯಾಂಟೀನ್‌ಗಳಿಂದ ಅಣ್ಣ, ಇಡ್ಲಿ ಯೋಜನೆಯನ್ನು ಜಾರಿಗೊಳಿಸುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದ ಅವರು ಈ ಯೋಜನೆಯಡಿ ಕೇವಲ ರೂ. 5 ಕ್ಕೆ 5 ಇಡ್ಲಿ, ಉಪ್ಪಿಟ್ಟು , ಚಿತ್ರಾನ್ನ, ಪುಳಿಯೊಗರೆ, ಮೊಸರನ್ನ ನೀಡುವ ಬಗ್ಗೆ ಆಯ್ದ ನಗರಗಳಲ್ಲಿ ಪ್ರಾಯೋಗಿಕವಾಗಿ ಯೋಜನೆಯನ್ನು ಜಾರಿಗೊಳಿಸಬಹುದಾಗಿದೆ ಎಂದರು. ಪ್ರಾಯೋಗಿಕವಾಗಿ ಬೆಂಗಳೂರಿನಲ್ಲಿ ಈ ಯೋಜನೆಯನ್ನು ಅನುಷ್ಠಾನಗೊಳಿಸಿ ನಂತರ ಮೈಸೂರು, ಹುಬ್ಬಳ್ಳಿ, ಧಾರವಾಡ, ಮಂಗಳೂರು ಹಾಗೂ ಕಲಬುರಗಿ ನಗರಗಳಿಗೆ ವಿಸ್ತರಿಸಲಾಗುವುದು ಎಂದರು.

ಕೇರಳ ಸರ್ಕಾರದ ಕಾರುಣ್ಯ ಬೆನೆವಲೆಂಟ್ ಫಂಡ್ ಮಾದರಿಯಲ್ಲಿ ಲಾಟರಿ ಆಧಾರಿತ ಅಣ್ಣಾ ಕಾರುಣ್ಯ,. ಆರೋಗ್ಯ ಯೋಜನೆಯನ್ನು ನಮ್ಮ ರಾಜ್ಯದಲ್ಲಿ ಅಳವಡಿಸಿಕೊಳ್ಳಲು ಸರ್ಕಾರಕ್ಕೆ ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದೆಂದರು. ಈ ಯೋಜನೆಯಡಿ ದೀರ್ಘಕಾಲಿಕ ರೋಗಗಳಿಂದ ಬಳಲುತ್ತಿರುವ ಬಡ, ಮಧ್ಯಮ ವರ್ಗದ ರೋಗಿಗಳಿಗೆ ಅನುಕೂಲವಾಗಲಿದೆ ಎಂದ ಅವರು ಈ ಯೋಜನೆಯಡಿ 5 ಲಕ್ಷದ ವರೆಗೂ ವೈದ್ಯಕೀಯ ವೆಚ್ಚ ಭರಿಸುವಂತೆ ಕೋರಲಾಗುವುದು. ವರ್ಷಕ್ಕೆ ಈ ಯೋಜನೆಯಿಂದ ಸರ್ಕಾರಕ್ಕೆ ಸುಮಾರು 500 ಕೋಟಿ ರೂ. ವೆಚ್ಚವಾಗಲಿದೆ ಎಂದು ಅವರು ತಿಳಿಸಿದರು.

ಶಬರಿಮಲೈ ಯಾತ್ರೆ ಸಮಯದಲ್ಲಿ ರಾಜ್ಯದ ಪ್ರದೇಶಗಳಿಂದ ಹೋಗುವ ಯಾತ್ರಾರ್ಥಿಗಳಿಗಾಗಿ ಕೆ.ಎಸ್.ಆರ್.ಟಿ.ಸಿ. ವತಿಯಿಂದ ಶೇ. 50 ರಷ್ಟು ರಿಯಾಯಿತಿ ದರದಲ್ಲಿ ಪ್ರಯಾಣ ದರವನ್ನು ನಿಗದಿಪಡಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಲಾಗುವುದು.

ಧಾರ್ಮಿಕ ದತ್ತಿಗೆ ಸಂಬಂಧಿಸಿದ ಸಿ ವರ್ಗದಲ್ಲಿನ ದೇವಸ್ಥಾನದಲ್ಲಿ ಅರ್ಚಕರಿಗೆ ಪ್ರಸ್ತುತ ನೀಡಲಾಗುತ್ತಿರುವ ರೂ. 1400 ಗಳ ವೇತನವನ್ನು ಹೆಚ್ಚಿಸಿ ಕನಿಷ್ಠ ರೂ. 5000 ಗಳ ವೇತನವನ್ನು ನೀಡುವಂತೆ ಮಂಡಳಿಯು ಸರ್ಕಾರಕ್ಕೆ ಶಿಫಾರಸ್ಸು ಮಾಡಲಿದೆ ಎಂದು ಅವರು ತಿಳಿಸಿದರು. ಸುಮಾರು 27,000 ಜನರಿಗೆ ಇದರಿಂದ ಉಪಯೋಗವಾಗಲಿದ್ದು ವರ್ಷಕ್ಕೆ ಸರ್ಕಾರಕ್ಕೆ 110 ಕೋಟಿ ರೂ.ಗಳ ವೆಚ್ಚವಾಗಲಿದೆ ಎಂದು ಅವರು ತಿಳಿಸಿದರು.
ಪಹೊ.

# ರೈತರ ಹೆಸರಿನಲ್ಲಿ ವಿದ್ಯುತ್ ದುರುಪಯೋಗ

**ಬೆಂಗಳೂರು, ಫೆಬ್ರವರಿ 03 (ಕರ್ನಾಟಕ ವಾರ್ತೆ):**

ರೈತರ ಹೆಸರಿನಲ್ಲಿ ಅಳವಡಿಸಿರುವ ಪಂಪ್‌ಸೆಟ್‌ಗಳಿಗೆ ನೀಡಲಾಗುತ್ತಿರುವ ಉಚಿತ ವಿದ್ಯುತ್ ಬೇರೆಯವರಿಂದ ದುರುಪಯೋಗವಾಗುತ್ತಿದೆ ಎಂದು ಇಂಧನ ಸಚಿವ ಶ್ರೀ ಡಿ.ಕೆ. ಶಿವಕುಮಾರ್ ಅವರು ಅಭಿಪ್ರಾಯಪಟ್ಟರು.

ವಿಧಾನ ಪರಿಷತ್ತಿನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯರಾದ ಜಿ.ಎಸ್. ನ್ಯಾಮಗೌಡ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ರಾಜ್ಯದಲ್ಲಿ 10 ಹೆಚ್.ಪಿ.ಗಿಂತ ಕಡಿಮೆ ಇರುವ ಕೃಷಿ ನೀರಾವರಿ ಪಂಪ್‌ಸೆಟ್‌ಗಳಿಗೆ ಉಚಿತವಾಗಿ ವಿದ್ಯುತ್‌ಅನ್ನು ಸರಬರಾಜು ಮಾಡಲಾಗುತ್ತಿದೆ. ಆದರೆ ಉಚಿತವಾಗಿ ಸರಬರಾಜು ಮಾಡುತ್ತಿರುವ ವಿದ್ಯುತ್‌ನ್ನು ರೈತರಲ್ಲದವರು ದುರುಪಯೋಗ ಪಡಿಸಿಕೊಳ್ಳುತ್ತಿರುವುದರಿಂದ ಸೋರಿಕೆಯಾಗುತ್ತಿರುವ ವಿದ್ಯುತ್‌ನ್ನು ತಡೆಗಟ್ಟಬೇಕಾದರೆ ಪಂಪ್‌ಸೆಟ್‌ಗಳಿಗೆ ಮೀಟರ್ ಅಳವಡಿಸಬೇಕಾಗುತ್ತದೆ ಎಂದರು.

ಸರ್ಕಾರವು ರೈತರಿಗೆ ವ್ಯವಸಾಯಕ್ಕೆ ಬೇಕಾಗುವಷ್ಟು ವಿದ್ಯುತ್‌ಅನ್ನು ಖಂಡಿತವಾಗಿಯೂ ಉಚಿತವಾಗಿ ನೀಡಲಿದೆ. ಪ್ರತಿ ವರ್ಷ 10 ಹೆಚ್.ಪಿ. ಮೋಟಾರ್ ಸಾಮರ್ಥ್ಯವಿರುವ ರೈತರ ಪಂಪ್‌ಸೆಟ್‌ಗಳಿಗೆ ಸರಾಸರಿ ರೂ. 29322.32 ರಷ್ಟು ರಿಯಾಯಿತಿಯನ್ನು ನೀಡಲಾಗುತ್ತಿದೆ. ಇದರಿಂದ ಸರ್ಕಾರಕ್ಕೆ 2014-15 ನೇ ಸಾಲಿಗೆ 6224 ಕೋಟಿ ರೂ.ಗಳಷ್ಟು ಹೊರೆಯಾಗಲಿದೆ ಎಂದರು.

ವಿದ್ಯುತ್ ಸೋರಿಕೆಯನ್ನು ತಡೆಗಟ್ಟಲು ಮಾತ್ರ ಮೀಟರ್‌ಅನ್ನು ಅಳವಡಿಸುವುದಾದರೆ ಪ್ರತಿಪಕ್ಷದ ಸದಸ್ಯರೆಲ್ಲರ ಒಪ್ಪಿಗೆ ಇದೆ. ಆದರೆ ರೈತರಿಗೆ ಮೀಟರ್‌ನ ಉಪಯೋಗದ ಬಗ್ಗೆ ಸರಿಯಾಗಿ ಮನವರಿಕೆ ಮಾಡುವಂತೆ ವಿರೋದ ಪಕ್ಷದ ನಾಯಕ ಕೆ.ಎಸ್. ಈಶ್ವರಪ್ಪ ಅಭಿಪ್ರಾಯಪಟ್ಟರು.

ಬಾಬು/ಬಿಜಿಪಿ/ಕೆಎಂ

## ಜಾತಿವಾರು ಜನಗಣತಿ:
## ಲಾಂಛನ ಮತ್ತು ಘೋಷವಾಕ್ಯ ಸೂಚಿಸಲು ಮುಕ್ತ ಸ್ಪರ್ಧೆ

**ಬೆಂಗಳೂರು, ಫೆಬ್ರವರಿ 03 (ಕರ್ನಾಟಕ ವಾರ್ತೆ):**

ಕರ್ನಾಟಕ ರಾಜ್ಯವು ಕೈಗೊಳ್ಳಲಿರುವ ಜಾತಿವಾರು ಜನಗಣತಿ ಕಾರ್ಯಕ್ರಮಕ್ಕೆ ವಿಶಿಷ್ಟ ಲಾಂಛನ ಮತ್ತು ಘೋಷವಾಕ್ಯವನ್ನು ಸೂಚಿಸಲು ಸಾರ್ವಜನಿಕರಿಗೆ ಮುಕ್ತ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ವಿವಿಧ ಜಾತಿ, ಜನಾಂಗಗಳ ಅಭಿವೃದ್ಧಿಯಲ್ಲಿ ವ್ಯತ್ಯಾಸಗಳನ್ನು ಕಡಿಮೆ ಮಾಡಲು, ಸಾಮಾಜಿಕ ನ್ಯಾಯದ ಗುರಿ ಸಾಧನೆಗೆ ರಾಜ್ಯ ಸರ್ಕಾರ ಕೈಗೊಂಡಿರುವ ಈ ಜಾತಿವಾರು ಜನಗಣತಿ ಬಹುದೊಡ್ಡ ಸಾಧನವಾಗಲಿದೆ. ಇದು ಸಮಾನ ಬೆಳವಣಿಗೆಯ ಪ್ರತೀಕವೂ ಆಗಲಿದೆ. ಫಲಾನುಭವಿಗಳಿಗೆ ನೇರವಾಗಿ ಸೌಲಭ್ಯಗಳನ್ನು ತಲುಪಿಸಲು ಇದು ಸಹಕಾರಿಯಾಗಲಿದೆ. ಸಮಾಜದ ಎಲ್ಲರನ್ನೂ ಒಳಗೊಂಡು ಪ್ರಗತಿ ಸಾಧಿಸುವ ನಿಟ್ಟಿನಲ್ಲಿ ಇದೊಂದು ಮಹತ್ವದ ಹೆಜ್ಜೆಯಾಗಲಿದೆ. ಶೈಕ್ಷಣಿಕವಾಗಿ ಹಾಗೂ ಸಾಮಾಜಿಕವಾಗಿ ಹಿಂದುಳಿಯಲು ಇರುವ ಕಾರಣಗಳ ಬಗ್ಗೆ ವಿಶ್ಲೇಷಿಸಿ, ಹಿಂದುಳಿದವರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಸೂಕ್ತ ಯೋಜನೆ ರೂಪಿಸಲು ಈ ಸಮೀಕ್ಷೆ ಉಪಯೋಗವಾಗಲಿದೆ.

ಸಾರ್ವಜನಿಕರಿಂದ ಸಂಗ್ರಹಿಸಲಾದ ಪ್ರವೇಶಗಳಲ್ಲಿ ಆಯ್ಕೆಯಾದ ಲಾಂಛನಕ್ಕೆ ರೂ.50,000/- ಹಾಗೂ ಘೋಷವಾಕ್ಯಕ್ಕೆ ರೂ. 30,000/-ಗಳ ಬಹುಮಾನವನ್ನು ನೀಡಲಾಗುವುದು.

ಲಾಂಛನ ಮತ್ತು ಘೋಷವಾಕ್ಯವು ಸ್ವಂತದ್ದಾಗಿದ್ದು, ಸುಲಭವಾಗಿ ಅರ್ಥೈಸಿಕೊಳ್ಳುವಂತಿರಬೇಕು. ಆಸಕ್ತರು ತಾವು ರಚಿಸಿದ ಲಾಂಛನ ಮತ್ತು ಘೋಷವಾಕ್ಯವನ್ನು, ತಮ್ಮ ಹೆಸರು, ವಿಳಾಸ, ದೂರವಾಣಿ ಸಂಖ್ಯೆ ಇ-ಮೇಲ್ ವಿಳಾಸ ಇತ್ಯಾದಿಗಳನ್ನು ಒಳಗೊಂಡಿರುವ ತಮ್ಮ ಪ್ರವೇಶಗಳನ್ನು ಆಯುಕ್ತರು, ಹಿಂದುಳಿದ ವರ್ಗಗಳ ಆಯೋಗ, 16ಡಿ, 3ನೇ ಮಹಡಿ, ಡಿ. ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬೆಡ್ ರಸ್ತೆ, ವಸಂತನಗರ, ಬೆಂಗಳೂರು- 560001, ಇಲ್ಲಿಗೆ ದಿನಾಂಕ 15-02-2015ರೊಳಗಾಗಿ ಕಳುಹಿಸಬಹುದು. ಹೆಚ್ಚಿನ ವಿವರಗಳಿಗಾಗಿ ದೂರವಾಣಿ 080-22268578 ನ್ನು ಸಂಪರ್ಕಿಸಬಹುದು.

**ಪಹೊ**

# ಸಾವಯವ ತಾರಸಿ ಮತ್ತು ಕೈ ತೋಟ ಅಭಿವೃದ್ಧಿ ತರಬೇತಿ

**ಬೆಂಗಳೂರು, ಫೆಬ್ರವರಿ 03 (ಕರ್ನಾಟಕ ವಾರ್ತೆ):**

ತೋಟಗಾರಿಕೆ ಇಲಾಖೆಯ ಜೈವಿಕ ಕೇಂದ್ರ ಹುಳಮಾವು, ಬೆಂಗಳೂರು ಇಲ್ಲಿ ಫೆಬ್ರವರಿ 13 ರಂದು ಬೆಳಗ್ಗೆ 9-30 ಕ್ಕೆ ಒಂದು ದಿನ "ಸಾವಯವ ತಾರಸಿ ಮತ್ತು ಕೈತೋಟ ಅಭಿವೃದ್ಧಿ" ಬಗ್ಗೆ ತರಬೇತಿ ಕಾರ್ಯಕ್ರಮವನ್ನು ನಗರವಾಸಿಗಳಿಗೆ/ರೈತರಿಗೆ/ಸಾರ್ವಜನಿಕರಿಗೆ/ವಿಧ್ಯಾರ್ಥಿಗಳಿಗೆ ಒಂದು ದಿವಸ ತರಬೇತಿಯನ್ನು ನೀಡಲಿದೆ.
ಈ ತರಬೇತಿಯಲ್ಲಿ ಭಾಗವಹಿಸಲು ಆಸಕ್ತಿಯುಳ್ಳವರು ರೂ. 300/- ಗಳನ್ನು ಪಾವತಿಸಿ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು(ಸಮನ್ವಯಾಧಿಕಾರಿ) ಹುಳಮಾವು, ಬೆಂಗಳೂರು ಇವರ ಕಚೇರಿಯಲ್ಲಿ ತರಬೇತಿಯ ಮುಂಚಿತವಾಗಿ ನೋಂದಣಿಯನ್ನು ಮಾಡಿಕೊಳ್ಳಲು ಸೂಚಿಸಿದೆ. ಹೆಚ್ಚಿನ ವಿವರಗಳಿಗೆ 26582775, 26584904, ಇ ಮೇಲ್ sadh.co52014@gami.com ಸಂಪರ್ಕಿಸಬಹುದು.

# ಶೌಚಾಲಯ ನಿರ್ಮಾಣ : ಉಚಿತ ಕರೆ ಸೇವೆ

**ಬೆಂಗಳೂರು, ಫೆಬ್ರವರಿ 3 (ಕರ್ನಾಟಕ ವಾರ್ತೆ)**

ರಾಜ್ಯದಲ್ಲಿ ಸ್ವಚ್ಛ ಭಾರತ್ ಮಿಷನ್ ಕಾರ್ಯಕ್ರಮದಡಿ ಗ್ರಾಮೀಣ ಪ್ರದೇಶಗಳಲ್ಲಿ ಶೌಚಾಲಯಗಳ ನಿರ್ಮಾಣದ ಕುರಿತಂತೆ ಸಾರ್ವಜನಿಕರ ಕುಂದುಕೊರತೆಗಳನ್ನು ನೇರವಾಗಿ ರಾಜ್ಯ ಸರ್ಕಾರದ ಗಮನಕ್ಕೆ ತರಲು ಉಚಿತ ಕರೆ ಸಂಖ್ಯೆ 1800-425-85555 ಯನ್ನು ಕರ್ನಾಟಕ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಲ್ಲಿ ಸ್ಥಾಪಿಸಲಾಗಿದೆ. ಇದರ ಪ್ರಯೋಜನವನ್ನು ಸಾರ್ವಜನಿಕರು ಬಳಸಿಕೊಳ್ಳುವಂತೆ ಸ್ವಚ್ಛ ಭಾರತ್ ಮಿಷನ್ ಮನವಿ ಮಾಡಿದೆ.

ಬಾಬು:ಜಿಪಿಆರ್.

## ಸಾಕ್ಷ್ಯಚಿತ್ರ ಪ್ರಸಾರ

ಬೆಂಗಳೂರು, ಫೆಬ್ರವರಿ 3 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ 2014-15 ನೇ ಸಾಲಿನಲ್ಲಿ ರಾಜ್ಯ ಮಹಿಳಾ ಸಾಧಕಿಯರ ಕುರಿತು 15 ನಿಮಿಷಗಳ ಅವಧಿಯ 41 ಸಾಕ್ಷ್ಯಚಿತ್ರಗಳನ್ನು ನಿರ್ಮಿಸಿದ್ದು ಈ ಸಾಕ್ಷ್ಯಚಿತ್ರಗಳನ್ನು ಬೆಂಗಳೂರು ದೂರದರ್ಶನ ಕೇಂದ್ರದ ಮೂಲಕ ಪ್ರತಿ ಶನಿವಾರ ಮತ್ತು ಭಾನುವಾರ ಹೊರತುಪಡಿಸಿ ದಿನಾಂಕ 4-2-2015 ರಿಂದ ಸಂಜೆ 6-45 ರಿಂದ 7.00 ಗಂಟೆಯ ಅವಧಿಯಲ್ಲಿ ವಾರದ ಐದು ದಿನಗಳಂದು ಪ್ರಸಾರ ಮಾಡಲಾಗುವುದು.

## ವಾಹನ ತಪಾಸಣೆ: 110 ಕೋಟಿ ದಂಡ ವಸೂಲಿ

ಬೆಂಗಳೂರು, ಫೆಬ್ರವರಿ 3 (ಕರ್ನಾಟಕ ವಾರ್ತೆ)

ಬೆಂಗಳೂರಿನಲ್ಲಿ ಎರಡುವರೆ ಲಕ್ಷ ವಾಹನಗಳ ತಪಾಸಣೆ ಮಾಡಿ 110 ಕೋಟಿ ರೂ. ದಂಡವನ್ನು ವಿಧಿಸಲಾಗಿದೆ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ತಿಳಿಸಿದರು.

ಇಂದು ಯವನಿಕಾದಲ್ಲಿ ಸಾರಿಗೆ ಇಲಾಖೆ ಮತ್ತು ಬೆಂಗಳೂರು ನಗರ ಸಂಚಾರ ಪೊಲೀಸ್ ವತಿಯಿಂದ 26 ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಸಪ್ತಾಹದ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.

ಹೆಲ್ಮಟ್ ಧರಿಸದೇ ವಾಹನ ಚಲಾವಣೆ ಮಾಡುತ್ತಿರುವವರ ಸಂಖ್ಯೆ ಹೆಚ್ಚಾಗಿದೆ. ಇದರಿಂದ ನಷ್ಟ ಸವಾರರಿಗೆ. ಅವರು ಅಪಘಾತದಿಂದ ಪ್ರಾಣ ಕಳೆದುಕೊಳ್ಳುವ ಸಂಭವ ಹೆಚ್ಚು .ಆದ್ದರಿಂದ ಸಂಚಾರ ನಿಯಮಗಳನ್ನು ಪಾಲಿಸಿ ಹೆಲ್ಮೆಟ್ ಧರಿಸುವುದು ಮುಖ್ಯ. ಇತ್ತೀಚೆಗೆ ಅಪಘಾತಗಳ ಸಂಖ್ಯೆ ಕಡಿಮೆಯಾಗುತ್ತಿದೆ. ಆದರೆ ವಾಹನ ಸಂಖ್ಯೆ ಹೆಚ್ಚಾಗಿ ಟ್ರಾಫಿಕ್ ಸಮಸ್ಯೆ ಬೆಂಗಳೂರಿನಲ್ಲಿ ಏರ್ಪಟ್ಟಿದೆ. ಜನವರಿ 28 ರಿಂದ ಫೆಬ್ರವರಿ 3 ರವರೆಗೆ ಸಾರಿಗೆ ಹಾಗೂ ಸಂಚಾರಿ ಪೊಲೀಸ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ರಸ್ತೆ ಸುರಕ್ಷತಾ ಸಪ್ತಾಹಕ್ಕೆ ಒಳ್ಳೆಯ ಪ್ರತಿಕ್ರಿಯೆ ಬಂದಿದೆ ಎಂದು ಅವರು ತಿಳಿಸಿದರು.

ಸಪ್ತಾಹದ ಅಂಗವಾಗಿ ರಕ್ತದಾನ ಶಿಬಿರ ಹಮ್ಮಿಕೊಳ್ಳಲಾಗಿತ್ತು. ವಿವಿಧ ಸ್ವರ್ಧೆಗಳಲ್ಲಿ ಭಾಗವಹಿದ್ದ ಮಕ್ಕಳನ್ನು ಪುರಸ್ಕರಿಸಲಾಯಿತು. ಉತ್ತಮ ಸಾಧನೆಗೈದ ಟ್ರಾಫಿಕ್ ಪೊಲೀಸರನ್ನು ಈ ಸಂರ್ಧದಲ್ಲಿ ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಸಾರಿಗೆ ಅಯುಕ್ತರಾದ ರಾಮೇಗೌಡ, ಸಂಚಾರ ಬಿ. ದಯಾನಂದ್, ಜಂಟಿ ಸಹಾಯಕ ಆಯುಕ್ತರಾದ ನರೇಂದ್ರ, ಅಪರ ಪೊಲೀಸ್ ಆಯುಕ್ತರು ಡಿ.ಸಿ.ಪಿ.ಗಳಾದ ಪ್ರಕಾಶ್, ಗಿರೀಶ್, ಖ್ಯಾತ ಚಿತ್ರ ನಟಿ ಹರ್ಷಿಕ ಪೂಣಚ್ಚ ಮುಂತಾದವರು ಉಪಸ್ಥಿತರಿದ್ದರು.
ಕವನ

**ವಿಧಾನ ಮಂಡಲದ ಸುದ್ದಿಗಳು:**

## ಅಗಲಿದ ಗಣ್ಯರಿಗೆ ವಿಧಾನಸಭೆ ಶ್ರದ್ಧಾಂಜಲಿ

ಬೆಂಗಳೂರು, ಫೆಬ್ರವರಿ 3 (ಕರ್ನಾಟಕ ವಾರ್ತೆ)

ಇತ್ತೀಚೆಗೆ ಅಗಲಿದ ರಾಜ್ಯದ ಮಾಜಿ ರಾಜ್ಯಪಾಲ ಸಿ.ಎ. ರಾಮೇಶ್ವರ ಠಾಕೂರ್, ಕೇಂದ್ರ ಮಾಜಿ ಸಚಿವೆ ಡಾ. ಸರೋಜಿನಿ ಮಹಿಷಿ, ವಿಧಾನಸಭೆಯ ಮಾಜಿ ಸದಸ್ಯರಾದ ಬಾಳಾಸಾಹೇಬ್ ಸಾರವಾಡಿ, ರಘುನಾಥ್ ವಿಠಲ್ ರಾವ್ ಕದಂ, ಎಸ್. ವಿ. ನಾಯಕ್, ನಾಗಪ್ಪ ನಿಂಗಪ್ಪ ಬೆಲ್ಲದ್, ಪ್ರೊ. ಪಿ.ಎಂ. ಚಿಕ್ಕಬೋರಯ್ಯ, ಆರ್.ಎಸ್. ಪಾಟೀಲ್, ನಾರಾಯಣರಾವ್ ಮನವಳ್ಳಿ ಹಾಗೂ ಖ್ಯಾತ ವ್ಯಂಗ್ಯ ಚಿತ್ರಕಾರ ಆರ್. ಕೆ. ಲಕ್ಷ್ಮಣ್ ಅವರುಗಳ ನಿಧನಕ್ಕೆ ರಾಜ್ಯ ವಿಧಾನಸಭೆ ಇಂದು ಶ್ರದ್ಧಾಂಜಲಿ ಅರ್ಪಿಸಿತು.

ಇಂದು ಬೆಳಗ್ಗೆ ವಿಧಾನಸಭೆ ಅಧಿವೇಶನ ಆರಂಭವಾಗುತ್ತಿದ್ದಂತೆ ವಿಧಾನಸಭಾಧ್ಯಕ್ಷ್ಯ ಶ್ರೀ ಕಾಗೋಡು ತಿಮ್ಮಪ್ಪ ಅವರು ಅಗಲಿದ ಗಣ್ಯರಿಗೆ ಸಂತಾಪ ಸೂಚನೆ ನಿರ್ಣಯ ಮಂಡಿಸಿ, ಮೃತರ ಗುಣಗಾನ ಮಾಡಿದರು.

ಸಂತಾಪ ಸೂಚಕ ನಿರ್ಣಯವನ್ನು ಅನುಮೋದಿಸಿ ಮಾತನಾಡಿದ ಸಭಾನಾಯಕ, ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರು ಡಾ. ಸರೋಜಿನಿ ಮಹಿಷಿ ಅವರು ನಾಲ್ಕು ಬಾರಿ ಲೋಕಸಭೆಗೆ ಹಾಗೂ ಎರಡು ಬಾರಿ ರಾಜ್ಯಸಭೆಗೆ ಆಯ್ಕೆಯಾದ ಕರ್ನಾಟಕ ಪ್ರಪ್ರಥಮ ಮಹಿಳಾ ಸಂಸದೆ ಎಂಬ ಹೆಮ್ಮೆಗೆ ಪಾತ್ರರಾಗಿದ್ದರೂ ಸಹ ತಮ್ಮ ಕೊನೆಯ ದಿನಗಳಲ್ಲಿ ದೆಹಲಿಯ ಸಣ್ಣ ಬಾಡಿಗೆಯ ಮನೆಯೊಂದರಲ್ಲಿ ವಾಸಿಸುತ್ತಿದ್ದರು. ಕನ್ನಡನಾಡು, ನುಡಿಗೆ ಅಂತಹ ಮಹಿಳೆಯಿಂದ ದೊರಕಿದ ಸೇವೆ ಅಮೂಲ್ಯ ಹಾಗೂ ಸ್ಮರಣೀಯ ಎಂದು ಭಾವುಕರಾಗಿ ನುಡಿದರು. ಮೂಲತ: ಮೈಸೂರಿನವರೇ ಆದ ಆರ್. ಕೆ. ಲಕ್ಷ್ಮಣ್ ಅವರ ನಿಧನವು ಚಿತ್ರಕಲೆಗೆ, ಪತ್ರಿಕೋದ್ಯಮ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಎಂದರು.

ವಿರೋಧ ಪಕ್ಷದ ನಾಯಕ ಶ್ರೀ ಜಗದೀಶ ಶೆಟ್ಟರ, ಜನತಾದಳ (ಜಾತ್ಯಾತೀತ) ದ ಶ್ರೀ ವೈ.ಎಸ್.ವಿ.ದತ್ತ, ಬಿ.ಜೆ.ಪಿ.ಯ ಶ್ರೀ ಗೋವಿಂದ ಕಾರಜೋಳ ಅವರುಗಳು ಮೃತರ ಗುಣಗಾನ ಮಾಡಿದರು.

ನಂತರ ವಿಧಾನಸಭೆಯು ಮೌನ ಆಚರಿಸಿ ಮೃತರಿಗೆ ಶ್ರದ್ಧಾಂಜಲಿ ಸಲ್ಲಿಸಿತು.

ಬಾಬು:ಜಿಪಿಆರ್.

## ಕಳೆದ ಮೂರು ವರ್ಷ ರಾಜ್ಯದಲ್ಲಿ 12,142 ಲೈಂಗಿಕ ದೌರ್ಜನ್ಯ

– ಗೃಹ ಸಚಿವ ಕೆ.ಜೆ. ಜಾರ್ಜ್

ಬೆಂಗಳೂರು, ಫೆಬ್ರವರಿ 3 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಕಳೆದ ಮೂರು ವರ್ಷದಲ್ಲಿ ಒಟ್ಟಾರೆ 12,142 ಲೈಂಗಿಕ ದೌರ್ಜನ್ಯ ಪ್ರಕರಣಗಳು ವರದಿಯಾಗಿವೆ ಎಂದು ರಾಜ್ಯ ಗೃಹ ಸಚಿವ ಶ್ರೀ ಕೆ.ಜೆ. ಜಾರ್ಜ್ ವಿಧಾನಸಭೆಯಲ್ಲಿ ಹೆಬ್ಬಾಳ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಜಗದೀಶ್ ಕುಮಾರ್ ಅವರ ಚುಕ್ಕೆ ಗುರುತ್ತಿಲ್ಲದ ಪ್ರಶ್ನೆಗೆ ಉತ್ತರಿಸಿ ತಿಳಿಸಿದ್ದಾರೆ.

ರಾಜ್ಯದಲ್ಲಿ 2012 ರಲ್ಲಿ 2,978 ಲೈಂಗಿಕ ಪ್ರಕರಣಗಳು, 2013 ರಲ್ಲಿ 3,913 ಲೈಂಗಿಕ ಪ್ರಕರಣಗಳು ಹಾಗೂ 2014 ರಲ್ಲಿ 5,251 ಲೈಂಗಿಕ ಪ್ರಕರಣಗಳು ವರದಿಯಾಗಿವೆ. ವರದಿಯಾದ ಎಲ್ಲಾ ಲೈಂಗಿಕ ದೌರ್ಜನ್ಯ ಪ್ರಕರಣಗಳಲ್ಲಿ ಆರೋಪಿಗಳ ವಿರುದ್ಧ ಪ್ರಕರಣ ದಾಖಲುಮಾಡಿ ಕಾನೂನು ರೀತ್ಯ ಕ್ರಮ ಕೈಗೊಂಡು ಆರೋಪಿಗಳನ್ನು ಬಂಧಿಸಿ, ಆರೋಪಿಗಳ ವಿರುದ್ಧ ಸಂಬಂಧಿಸಿದ ನ್ಯಾಯಾಲಯಗಳಲ್ಲಿ ದೋಷಾರೋಪಣಾ ಪತ್ರ ಸಲ್ಲಿಸಲಾಗುತ್ತಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಹಲವು ಕಠಿಣ ಕ್ರಮಗಳನ್ನು ಜಾರಿಗೊಳಿಸುತ್ತಿದೆ ಎಂದು ಸಚಿವ ಕೆ.ಜೆ. ಜಾರ್ಜ್ ತಿಳಿಸಿದ್ದಾರೆ.
ಬಾಬು:ಜಿಪಿಆರ್.

# ರಾಜ್ಯದ ಅಧೀನ ನ್ಯಾಯಾಲಯಗಳಲ್ಲಿ 6,849 ಖಾಲಿ ಹುದ್ದೆಗಳು

**ಬೆಂಗಳೂರು, ಫೆಬ್ರವರಿ 3 (ಕರ್ನಾಟಕ ವಾರ್ತೆ)**

ರಾಜ್ಯದ ಅಧೀನ ನ್ಯಾಯಾಲಯಗಳಲ್ಲಿ ವಿವಿಧ ವೃಂದದ 6,849 ಹುದ್ದೆಗಳು ಖಾಲಿ ಇದೆ ಹಾಗೂ ನ್ಯಾಯಾಂಗ ಸೇವೆ ಅಧಿಕಾರಿಗಳ ಒಟ್ಟು 654 ಹುದ್ದೆಗಳು ಖಾಲಿ ಇವೆ ಎಂದು ರಾಜ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಶ್ರೀ ಟಿ.ಬಿ. ಜಯಚಂದ್ರ ವಿಧಾನಸಭೆಗೆ ಇಂದು ತಿಳಿಸಿದರು.

ಇಂದು ವಿಧಾನಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಚಿಕ್ಕಮಗಳೂರು ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಸಿ.ಟಿ. ರವಿ ಅವರ ಪ್ರಶ್ನೆಯನ್ನು ಅವರ ಪರವಾಗಿ ಶಾಸಕ ಶ್ರೀ ಲಕ್ಷ್ಮಣ ಸವದಿ ಅವರು ಕೇಳಿದ ಪ್ರಶ್ನೆಗೆ ಉತ್ತರಿಸುತ್ತಾ ತಿಳಿಸಿದರು.

ಕರ್ನಾಟಕ ಸಾರ್ವಜನಿಕ ಉದ್ಯೋಗ (ಹೈದರಾಬಾದ್ ಕರ್ನಾಟಕ ಪ್ರದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ) ಆದೇಶ, 2013 ರ ಪ್ರಕಾರ ಮೀಸಲಾತಿಯನ್ನು ಅನುಸರಿಸಿ ಖಾಲಿ ಹುದ್ದೆಗಳನ್ನು ತುಂಬಲು ಕ್ರಮ ವಹಿಸಲಾಗುತ್ತಿದೆ ಹಾಗೂ ಕರ್ನಾಟಕ ನ್ಯಾಯಾಂಗ ಸೇವೆ (ನೇಮಕಾತಿ) ನಿಯಮಗಳು, 2004 ಕ್ಕೆ ತಿದ್ದುಪಡಿ ತರುವ ಪ್ರಕ್ರಿಯೆಯು ಅಂತಿಮಗೊಂಡಿದ್ದು, ಇಷ್ಟರಲ್ಲಿಯೇ ಖಾಲಿ ಇರುವ ನ್ಯಾಯಾರ್ಧಈಶರ ಹುದ್ದೆಗಳನ್ನು ಭರ್ತಿ ಮಾಡಲು ಉಚ್ಚ ನ್ಯಾಯಾಲಯವು ಕ್ರಮ ಕೈಗೊಳ್ಳಲಿದೆ ಎಂದು ತಮ್ಮ ಉತ್ತರದಲ್ಲಿ ಸಚಿವರು ತಿಳಿಸಿದ್ದಾರೆ.

ಅಧೀನ ನ್ಯಾಯಾಲಯಗಳಲ್ಲಿನ ಬಹುತೇಕ ಹುದ್ದೆಗಳು ಲಿಪಿಕ ವೃಂದದ ಹುದ್ದೆಗಳಾಗಿದ್ದು, ಕೆಲವು ಹುದ್ದೆಗಳನ್ನು ನೇರನೇಮಕಾತಿ ಮೂಲಕವು ಹಾಗೂ ಇನ್ನೂ ಕೆಲವು ಹುದ್ದೆಗಳನ್ನು ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿನ ವಿಧಿ ವಿಧಾನದಂತೆ ಬಡ್ತಿ ನೀಡುವ ಮೂಲಕ ತುಂಬಬಹುದಾದ ಹುದ್ದೆಗಳಾಗಿರುತ್ತದೆ ಎಂದು ಸಚಿವರು ತಿಳಿಸಿದ್ದಾರೆ.

ಬಾಬು:ಜಿಪಿಆರ್.

# ರಾಜ್ಯದಲ್ಲಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ 7850.38 ಲಕ್ಷ ರೂ ಅನುದಾನ ಮಂಜೂರು

ಬೆಂಗಳೂರು, ಫೆಬ್ರವರಿ 3 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ದೇವಸ್ಥಾನಗಳ ಜೀರ್ಣೋದ್ದಾರಕ್ಕಾಗಿ ರಾಜ್ಯ ಸರ್ಕಾರವು 2014-15 ನೇ ಸಾಲಿನಲ್ಲಿ ರೂ 7850.38 ಲಕ್ಷ ಅನುದಾನವನ್ನು ವಿವಿಧ ಯೋಜನೆಗಳಡಿ ಜಿಲ್ಲಾವಾರು ಮತ್ತು ವಿಧಾನಸಭಾ ಕ್ಷೇತ್ರವಾರು ಬಿಡುಗಡೆಮಾಡಿದೆ ಎಂದು ರಾಜ್ಯ ಮುಜರಾಯಿ ಖಾತೆ ಸಚಿವ ಶ್ರೀ ಟಿ. ಬಿ. ಜಯಚಂದ್ರ ಅವರು ವಿಧಾನಸಭೆಯಲ್ಲಿ ಇಂದು ಪ್ರಶ್ನೋತ್ತರ ಅವಧಿಯಲ್ಲಿ ಬಿ.ಜೆ.ಪಿ. ಶಾಸಕ ಶ್ರೀ ಬಸವರಾಜ ಎಸ್. ಬೊಮ್ಮಾಯಿ ಅವರ ಪ್ರಶ್ನೆಗೆ ಉತ್ತರಿಸುತ್ತಿದ್ದರು.

ಈ ಯೋಜನೆಯಡಿ ಒದಗಿಸಿರುವ ಅನುದಾನವನ್ನು ಜಿಲ್ಲಾವಾರು ಮಂಜೂರು ಮಾಡಲಾಗುತ್ತಿದ್ದು, 2014-15 ನೇ ಸಾಲಿನಲ್ಲಿ ರೂ 5250.38 ಲಕ್ಷಗಳನ್ನು ಬಿಡುಗಡೆ ಮಾಡಲಾಗಿರುತ್ತದೆ. 2014-15ನೇ ಸಾಲಿನಲ್ಲಿ ಆರಾಧನಾ ಯೋಜನೆ, ವಿಶೇಷ ಘಟಕ ಯೋಜನೆ ಹಾಗೂ ಗಿರಿಜನ ಉಪಯೋಜನೆಯಡಿ ಆಯವ್ಯಯದಲ್ಲಿ ಒದಗಿಸಿದ ಅನುದಾನವನ್ನು ಕ್ರೋಢೀಕರಿಸಿ ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ ತಲಾ ರೂ 11.60 ಲಕ್ಷಗಳನ್ನು ನಿಗಧಿಪಡಿಸಿ, ಒಟ್ಟು 2600.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ ಎಂದು ಅವರು ತಿಳಿಸಿದರು.

ದೇವಸ್ಥಾನಗಳ ಜೀರ್ಣೋದ್ಧಾರಕ್ಕಾಗಿ ಬಿಡುಗಡೆ ಮಾಡಿರುವ ಅನುದಾನದ ಜಿಲ್ಲಾವಾರು ವಿವರವನ್ನು ಅನುಬಂಧ-1 ಮತ್ತು ಅನುಬಂಧ-ರಲ್ಲಿ ಒದಗಿಸಿದೆ ಎಂದರು.

ಬಾಬು:ಜಿಪಿಆರ್.

# 63 ಸಾವಿರ ಹೆಕ್ಟೇರ್ ಭೂಮಿ ಸಾವಯವ ಕೃಷಿಗೆ ಪರಿವರ್ತನೆ

ಬೆಂಗಳೂರು, ಫೆಬ್ರವರಿ 3 (ಕರ್ನಾಟಕ ವಾರ್ತೆ)

ಸಾವಯವ ಭಾಗ್ಯ ಯೋಜನೆಯಡಿ ರಾಜ್ಯದ 63 ಸಾವಿರ ಹೆಕ್ಟೇರ್ ಭೂಮಿಯನ್ನು ಸಾವಯವ ಕೃಷಿಗೆ ಪರಿವರ್ತಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಕೃಷಿ ಸಚಿವ ಶ್ರೀ ಕೃಷ್ಣ ಭೈರೇಗೌಡ ಅವರು ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿಂದು ಪ್ರಶ್ನೋತ್ತರ ವೇಳೆಯಲ್ಲಿ ಸದಸ್ಯ ಡಾ. ಮತ್ತಿಕಟ್ಟಿ ವೀರಣ್ಣ ಅವರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಸಚಿವರು ರೈತರು ಹೆಚ್ಚು ಇಳುವರಿ ಪಡೆಯಬೇಕೆಂಬ ಉದ್ದೇಶದಿಂದ ಅವೈಜ್ಞಾನಿಕವಾಗಿ ರಾಸಾಯನಿಕ ಗೊಬ್ಬರಗಳನ್ನು ವ್ಯವಸ್ಥಾಯಕ್ಕೆ ಬಳಸುತ್ತಿರುವುದರಿಂದ ಭೂಮಿಯ ಫಲವತ್ತತೆಯು ಕುಸಿಯುತ್ತಿದೆ ಎಂದರು.

ಆದ್ದರಿಂದ ಮಣ್ಣಿನ ಗುಣಮಟ್ಟವನ್ನು ಹೆಚ್ಚಿಸಲು, ರಾಸಾಯನಿಕ ರಸಗೊಬ್ಬರಗಳ ಮೇಲಿನ ಅವಲಂಬನೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಸಾವಯವ ಕೃಷಿ ನೀತಿಯನ್ನು 2004-05 ನೇ ಸಾಲಿನಿಂದ ಜಾರಿಗೆ ತರಲಾಗಿದೆ. ನಮ್ಮ ಸರ್ಕಾರವು 2013-14 ನೇ ಸಾಲಿನಿಂದ ಸಾವಯವ ಭಾಗ್ಯ ಯೋಜನೆಯನ್ನು ಕಾರ್ಯರೂಪಕ್ಕೆ ತರುವ ಮೂಲಕ 79 ಸರ್ಕಾರೇತರ ಸಂಸ್ಥೆಗಳ ಮೂಲಕ ಈ ಯೋಜನೆಗೆ 53,829 ಫಲಾನುಭವಿಗಳನ್ನೊಳಗೊಂಡಂತೆ 63677 ಹೆಕ್ಟೇರ್ ಭೂಮಿಯನ್ನು ಸಾವಯವ ಕೃಷಿಗೆ ಪರಿವರ್ತಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಹಾಗೆಯೇ ಸಾವಯವ ಗೊಬ್ಬರ, ಜೈವಿಕ

ಕೀಟನಾಶಕಗಳನ್ನು ಹಾಗೂ ಜೈವಿಕ ನಿಯಂತ್ರಣಕಾರಕಗಳನ್ನು ವ್ಯವಸಾಯಕ್ಕೆ ಬಳಸುವಂತೆ ರೈತರಿಗೆ ಅರಿವು ಮೂಡಿಸುವುದು ಮುಖ್ಯವಾಗಿದೆ ಎಂದು ಸಚಿವರು ತಿಳಿಸಿದರು.

ಸಣ್ಣ ಮತ್ತು ಮಧ್ಯಮ ಕೃಷಿಕರ ಅನುಕೂಲಕ್ಕಾಗಿ ಕೃಷಿ ಯಾಂತ್ರೀಕರಣ ಯೋಜನೆಯಡಿ ತಾಲ್ಲೂಕು ಮಟ್ಟದಲ್ಲಿ ತೆರೆಯಲಾಗಿರುವ ಯಂತ್ರೋಪಕರಣ ಬಾಡಿಗೆ ಕೇಂದ್ರಗಳು ಯಶ್ವಸಿಯಾಗಿ ಕಾರ್ಯನಿರ್ವಹಿಸಿದಲ್ಲಿ, ಮುಂದಿನ ಸಾಲಿಗೆ ಹೋಬಳಿ ಮಟ್ಟದಲ್ಲೂ ಯಂತ್ರೋಪಕರಣ ಬಾಡಿಗೆ ಕೇಂದ್ರಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದೆಂದರು.

ಪಹೊ:ಬಿಜಿಪಿ:ಜಿಪಿಆರ್.